# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 109

ಸದಸ್ಯರ ಹೆಸರು : ಶ್ರೀ ಸುನೀಲ್ ವಲ್ಯಾಪುರ್

ಉತ್ತರಿಸುವ ಸಚಿವರು : ಸಾರಿಗೆ ಮತ್ತು ಮುಜರಾಯಿ ಸಚಿವರು

ಉತ್ತರಿಸುವ ದಿನಾಂಕ : 14.02.2024

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ.</td><td>ರಾಜ್ಯದಲ್ಲಿ ಸಂಚರಿಸುತ್ತಿರುವ ಸರ್ಕಾರಿ ಬಸ್‌ಗಳ ಸಂಖ್ಯೆ ಎಷ್ಟು; (ನಾಲ್ಕು ನಿಗಮಗಳು ಸೇರಿದಂತೆ ನಿಗಮವಾರು ಸಂಪೂರ್ಣ ಮಾಹಿತಿ ನೀಡುವುದು)</td><td>ರಾಜ್ಯದಲ್ಲಿ ರಾಜ್ಯದ ನಾಲ್ಕು ಸಂಸ್ಥೆಗಳಾದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಮತ್ತು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಗಳಿಂದ ಕಾರ್ಯಾಚರಿಸುತ್ತಿರುವ ಬಸ್‌ಗಳ ಸಂಖ್ಯೆಯ (ನಿಗಮವಾರು) ಮಾಹಿತಿ ಈ ಕೆಳಕಂಡಂತಿದೆ:
<table>
<tr><th>ಸಂಸ್ಥೆ</th><th>ಬಸ್‌ಗಳ ಸಂಖ್ಯೆ</th></tr>
<tr><td>ಕ.ರಾ.ರ.ಸಾ.ನಿಗಮ</td><td>7651</td></tr>
<tr><td>ಬೆಂ.ಮ.ಸಾ.ಸಂಸ್ಥೆ</td><td>6147</td></tr>
<tr><td>ವಾ.ಕ.ರ.ಸಾ.ಸಂಸ್ಥೆ</td><td>4895</td></tr>
<tr><td>ಕ.ಕ.ರ.ಸಾ.ನಿಗಮ</td><td>4845</td></tr>
</table></td></tr>
<tr><td>ಆ.</td><td>ರಾಜ್ಯದಲ್ಲಿ ಶಕ್ತಿ ಯೋಜನೆಯಡಿ ಮಹಿಳೆಯರಿಗೆ ಉಚಿತ ಪ್ರಯಾಣದ ಗ್ಯಾರಂಟಿ ಜಾರಿಯಾದಾಗಿನಿಂದ ಮಹಿಳೆಯರು ಸರ್ಕಾರಿ ಬಸ್‌ಗಳಲ್ಲಿ ಸಂಚರಿಸಿರುವ ಒಟ್ಟು ಟಿಕೆಟ್‌ನ ಮೌಲ್ಯವೆಷ್ಟು;</td><td>ರಾಜ್ಯದಲ್ಲಿ ಶಕ್ತಿ ಯೋಜನೆಯಡಿ ಮಹಿಳೆಯರಿಗೆ ಉಚಿತ ಪ್ರಯಾಣದ ಗ್ಯಾರಂಟಿ ಜಾರಿಯಾದಾಗಿನಿಂದ ದಿನಾಂಕ:11.06.2023ರಿಂದ 31.01.2024ರ ಅವಧಿಯಲ್ಲಿ ಮಹಿಳೆಯರು ರಾಜ್ಯದ ನಾಲ್ಕು ಸಂಸ್ಥೆಗಳ ಬಸ್‌ಗಳಲ್ಲಿ ಸಂಚರಿಸಿರುವ ಒಟ್ಟು ಟಿಕೆಟ್‌ನ ಮೌಲ್ಯದ ಮಾಹಿತಿ ಈ ಕೆಳಕಂಡಂತಿದೆ:<br>(ರೂ.ಲಕ್ಷಗಳಲ್ಲಿ)
<table>
<tr><th>ಸಂಸ್ಥೆ</th><th>ಟಿಕೆಟ್‌ನ ಮೌಲ್ಯ</th></tr>
<tr><td>ಕ.ರಾ.ರ.ಸಾ.ನಿಗಮ</td><td>131765.00</td></tr>
<tr><td>ಬೆಂ.ಮ.ಸಾ.ಸಂಸ್ಥೆ</td><td>60071.60</td></tr>
<tr><td>ವಾ.ಕ.ರ.ಸಾ.ಸಂಸ್ಥೆ</td><td>86202.00</td></tr>
<tr><td>ಕ.ಕ.ರ.ಸಾ.ನಿಗಮ</td><td>69873.00</td></tr>
<tr><td>ಒಟ್ಟು</td><td>347911.60</td></tr>
</table></td></tr>
</table>

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಇ.</td><td>ಈಗಾಗಲೇ ಸಾರಿಗೆ ನಿಗಮಗಳು ಆರ್ಥಿಕ ಸಂಕಷ್ಟದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಶಕ್ತಿ ಯೋಜನೆಯಿಂದ ಉಂಟಾದ ಆರ್ಥಿಕ ನಷ್ಟವನ್ನು ನಿಗಮಗಳಿಗೆ ಸರ್ಕಾರದಿಂದಲೇ ಭರಿಸಲಾಗುತ್ತಿದೆಯೇ;</td><td>ಸರ್ಕಾರದ ಗಮನಕ್ಕೆ ಬಂದಿದೆ.<br><br>ಶಕ್ತಿ ಯೋಜನೆಯಡಿ ಸಾರಿಗೆ ಸಂಸ್ಥೆಗಳು ಶೂನ್ಯ ಟಿಕೇಟ್ ವಿತರಿಸಿ ತಗಲುವ ವಾಸ್ತವಿಕ ವೆಚ್ಚವನ್ನಾಧರಿಸಿ ಸರ್ಕಾರದಿಂದ ಮರುಪಾವತಿಸಲು ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ರೂ.2800.00 ಕೋಟಿಗಳ ಅನುದಾನವನ್ನು ಒದಗಿಸಲಾಗಿದ್ದು, ಸದರಿ ಅನುದಾನಕ್ಕನುಗುಣವಾಗಿ ವಾಸ್ತವಿಕ ವೆಚ್ಚದ ಆಧಾರದ ಮೇಲೆ ಅನುಪಾತದನ್ವಯ ಸಾರಿಗೆ ಸಂಸ್ಥೆಗಳಿಗೆ ಮಾಹೆಯಾನ ಅನುದಾನ ಬಿಡುಗಡೆಗೊಳಿಸಲಾಗುತ್ತಿದೆ.<br><br>ಜೂನ್-2023ರಿಂದ ಮಾರ್ಚ್-2024ರವರೆಗೆ ಅಂದಾಜಿಸಿರುವ ವಾಸ್ತವಿಕ ವೆಚ್ಚ ರೂ.4377.96 ಕೋಟಿಗಳಲ್ಲಿ ಪ್ರಸ್ತುತ 2023-24ನೇ ಸಾಲಿನ ಆಯವ್ಯಯದಲ್ಲಿ ಒದಗಿಸಿರುವ ರೂ.2800.00 ಕೋಟಿಗಳ ಅನುದಾನವನ್ನು ಹೊರತುಪಡಿಸಿ, ರೂ.1577.96 ಕೋಟಿಗಳನ್ನು ಹೆಚ್ಚುವರಿಯಾಗಿ ಒದಗಿಸುವಂತೆ ಸಾರಿಗೆ ಸಂಸ್ಥೆಗಳಿಂದ ಕೋರಿರುವ ಪ್ರಸ್ತಾವನೆಯು ಪರಿಶೀಲನೆಯಲ್ಲಿರುತ್ತದೆ.</td></tr>
<tr><td>ಈ.</td><td>ಬಂದಿದ್ದಲ್ಲಿ ಇಲ್ಲಿಯವರೆಗೆ ಯಾವ ಯಾವ ನಿಗಮಗಳಿಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ; (ನಿಗಮವಾರು ಮಾಹಿತಿ ನೀಡುವುದು)</td><td>ಶಕ್ತಿ ಯೋಜನೆಯಡಿ ನಾಲ್ಕು ಸಾರಿಗೆ ಸಂಸ್ಥೆಗಳಿಗೆ ಜೂನ್-2023ರಿಂದ ಫೆಬ್ರವರಿ-2024ರ ಮಾಹೆಗಳಿಗೆ ಒಟ್ಟಾರೆ ರೂ.255366.99 ಲಕ್ಷಗಳನ್ನು ಈ ಕೆಳಕಂಡಂತೆ ನಿಗಮವಾರು ಬಿಡುಗಡೆಗೊಳಿಸಲಾಗಿದೆ:<br><br>(ರೂ.ಲಕ್ಷಗಳಲ್ಲಿ)<br><table><tr><th>ಸಂಸ್ಥೆ</th><th>ಬಿಡುಗಡೆ ಮೊತ್ತ</th></tr><tr><td>ಕ.ರಾ.ರ.ಸಾ.ನಿಗಮ</td><td>96828.82</td></tr><tr><td>ಬೆಂ.ಮ.ಸಾ.ಸಂಸ್ಥೆ</td><td>43700.61</td></tr><tr><td>ವಾ.ಕ.ರ.ಸಾ.ಸಂಸ್ಥೆ</td><td>63484.85</td></tr><tr><td>ಕ.ಕ.ರ.ಸಾ.ನಿಗಮ</td><td>51352.71</td></tr><tr><td>ಒಟ್ಟು</td><td>255366.99</td></tr></table></td></tr>
</table>

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಉ. | ಶಕ್ತಿ ಯೋಜನೆ ಜಾರಿಯ ನಂತರ ಸರ್ಕಾರಿ ಬಸ್‌ಗಳಲ್ಲಿ ಪ್ರಯಾಣಿಕರ ಒತ್ತಡದಿಂದಾಗಿ ಶಾಲಾ ವಿದ್ಯಾರ್ಥಿಗಳ ಪ್ರಯಾಣಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಹೆಚ್ಚುವರಿ ಬಸ್‌ಗಳ ಓಡಾಟಕ್ಕೆ ವ್ಯವಸ್ಥೆ ಮಾಡಲಾಗಿದೆಯೇ; ಯಾವ ಯಾವ ನಿಗಮಗಳಲ್ಲಿ ಎಷ್ಟು ಹೊಸ ಬಸ್‌ಗಳನ್ನು ಓಡಿಸಲಾಗುತಿದೆ; (ನಿಗಮವಾರು ಮಾಹಿತಿ ನೀಡುವುದು) | ಮಹಿಳೆಯರಿಗೆ ಉಚಿತ ಸಾರಿಗೆ ವ್ಯವಸ್ಥೆ ಕಲ್ಪಿಸಿರುವುದರಿಂದ ಸಾರಿಗೆ ಸಂಸ್ಥೆಗಳ ಬಸ್‌ಗಳಲ್ಲಿ ಸಂಚರಿಸುವವರ ಸಂಖ್ಯೆ ಗಣನೀಯವಾಗಿ ಹೆಚ್ಚಾಗಿದ್ದು, ಇದರಿಂದಾಗಿ ಶಾಲಾ ಮಕ್ಕಳು ಅನಾನುಕೂಲವಾಗುತ್ತಿರುವ ಬಗ್ಗೆ ಕೆಲವು ಸ್ಥಳಗಳಲ್ಲಿ ವರದಿಯಾಗಿದ್ದು, ಅಂತಹ ಸ್ಥಳಗಳನ್ನು ಗುರುತಿಸಿ ಆ ಸ್ಥಳಗಳಿಗೆ ನಿಗಮಗಳು ಸಿಬ್ಬಂದಿಗಳನ್ನು ಮೇಲ್ವಿಚಾರಣೆಗಾಗಿ ನಿಯೋಜಿಸಲಾಗುತ್ತಿದೆ ಹಾಗೂ ಬೇಡಿಕೆಗೆ ಅನುಗುಣವಾಗಿ ಹೆಚ್ಚುವರಿ ಸರತಿಗಳನ್ನು ಅಳವಡಿಸಲು ಕ್ರಮ ವಹಿಸಲಾಗುತ್ತಿದೆ.<br><br>ಶಾಲಾ/ಕಾಲೇಜು ವಿದ್ಯಾರ್ಥಿಗಳಿಗೆ ಅವರ ಶಾಲಾ ಕಾಲೇಜು ಸಮಯಕ್ಕೆ ಅವಶ್ಯಕತೆಗೆ ಅನುಗುಣವಾಗಿ ಸುತ್ತುವಳಿಗಳು/ಬಸ್ಸುಗಳನ್ನು ಕಲ್ಪಿಸಲು ಈ ಕೆಳಕಂಡ ಅಂಶಗಳನ್ನು ಅನುಸರಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆಗಳನ್ನು ನೀಡಲಾಗಿದೆ:<br><br>• ಗ್ರಾಮೀಣ ಪ್ರದೇಶಗಳ ವಿಭಾಗದ ವ್ಯಾಪ್ತಿಯಲ್ಲಿ ಬರುವ ಶಾಲಾ/ ಕಾಲೇಜುಗಳ ಪ್ರಾಂಶುಪಾಲರು/ ಮುಖ್ಯಸ್ಥರುಗಳನ್ನು ಸಂಪರ್ಕಿಸಿ, ಶಾಲಾ/ ಕಾಲೇಜುಗಳ ಸಮಯಗಳನ್ನು ತಿಳಿದುಕೊಂಡು ಸದರಿ ಸಮಯಕ್ಕೆ ಸಾರಿಗೆಗಳನ್ನು ಕಾರ್ಯಾಚರಿಸಲು ಸೂಕ್ತ ಕ್ರಮ ಕೈಗೊಳ್ಳುವುದು.<br>• ಶಾಲಾ/ ಕಾಲೇಜು ವಿದ್ಯಾರ್ಥಿಗಳು ಹೆಚ್ಚಿಗೆ ಸೇರುವ ಬಸ್ ನಿಲ್ದಾಣ/ ಜಂಕ್ಷನ್‌ಗಳಲ್ಲಿ ಸಾರಿಗೆ ಸೇವೆಗಳ ಮೇಲ್ವಿಚಾರಣೆಗೆ ಸಂಚಾರ ನಿಯಂತ್ರಕರು/ ಇತರೆ ಮೇಲ್ವಿಚಾರಕರನ್ನು ತಪ್ಪದೇ ನಿಯೋಜಿಸಿ ಸುಗಮ ಕಾರ್ಯಾಚರಣೆ ಬಗ್ಗೆ ನಿಗಾ ವಹಿಸುವುದು.<br>• ವಿಭಾಗದ ಎಲ್ಲಾ ಚಾಲನಾ ಸಿಬ್ಬಂದಿಗಳಿಗೆ ಶಾಲಾ ಕಾಲೇಜು ವಿದ್ಯಾರ್ಥಿಗಳು ಬಸ್ಸುಗಳಲ್ಲಿ ಪ್ರಯಾಣಿಸಲು ಅನುವಾಗಲು ನಿಗದಿತ ಬಸ್ ನಿಲ್ದಾಣಗಳಲ್ಲಿ ನಿಲುಗಡೆ ನೀಡಿ ಅವರನ್ನು ಹತ್ತಿಸಿ/ ಇಳಿಸಿಕೊಂಡು ಮುಂದೆ ಹೋಗುವುದರ ಜೊತೆಗೆ ವಿದ್ಯಾರ್ಥಿಗಳೊಂದಿಗೆ ಸೌಜನ್ಯಯುತವಾಗಿ ವರ್ತಿಸಲು ತಿಳುವಳಿಕೆ ನೀಡುವುದು.<br>• ಪ್ರಸ್ತುತ, ಕಲ್ಪಿಸುತ್ತಿರುವ ಸಾರಿಗೆಗಳು ಶಾಲಾ/ಕಾಲೇಜು ವಿದ್ಯಾರ್ಥಿಗಳ ಬೇಡಿಕೆಗೆ ಅನುಗುಣವಾಗಿ ಇರುತ್ತದೆ.<br><br>**ಕ.ರಾ.ರ.ಸಾ.ನಿಗಮ:**<br><br>ಶಕ್ತಿ ಯೋಜನೆ ಜಾರಿಗೂ ಮೊದಲು 45255 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು, ಶಕ್ತಿ ಯೋಜನೆ ಜಾರಿಯಾದ ನಂತರದಲ್ಲಿ 47752 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಪ್ರತಿದಿನ 2497 ಹೆಚ್ಚುವರಿ ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಅಲ್ಲದೇ, 177 ಹೊಸ ಅನುಸೂಚಿಗಳನ್ನು ಪ್ರಾರಂಭಿಸಲಾಗಿದೆ.<br><br>ನಿಗಮದಿಂದ ಕಳೆದ 04 ವರ್ಷಗಳಲ್ಲಿ ಹೊಸ ವಾಹನಗಳನ್ನು ಖರೀದಿಸಿರುವುದಿಲ್ಲ. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| | | ಪ್ರಸಕ್ತ ಸಾಲಿನಲ್ಲಿ ಈ ಕೆಳಕಂಡ ಬಸ್ಸುಗಳನ್ನು ಖರೀದಿಸಲು / ಜಿ.ಸಿ.ಸಿ ಆಧಾರದ ಮೇಲೆ ಕಾರ್ಯಾಚರಿಸಲು ಪ್ರಕ್ರಿಯೆ ಜಾರಿಯಲ್ಲಿರುತ್ತದೆ:<br><br>• ಸರ್ಕಾರದಿಂದ ನಿಗಮಕ್ಕೆ ವಿಶೇಷ ಬಂಡವಾಳ ನೆರವಿನಡಿ ಒದಗಿಸಿರುವ ರೂ.100.00 ಕೋಟಿಗಳ ಅನುದಾನದಲ್ಲಿ ಕರ್ನಾಟಕ ಸಾರಿಗೆ ಸಾಮಾನ್ಯ ಮಾದರಿಯ ಒಟ್ಟು 250 ಸಂಖ್ಯೆ ಹೊಸ ವಾಹನಗಳನ್ನು ಖರೀದಿಸಲು ಆಡಳಿತಾತ್ಮಕ ಅನುಮೋದನೆ ನೀಡಿ, ಮೊದಲನೇ ಕಂತಿನ ಅನುದಾನ ರೂ.6235.44 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದ್ದು, ಖರೀದಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.<br>• 25 ಹೊಸ ಸಾಮಾನ್ಯ ಕರ್ನಾಟಕ ಸಾರಿಗೆ ಮಾದರಿ ಬಸ್ಸುಗಳ ಖರೀದಿ.<br>• 100 ಹೊಸ ಸಾಮಾನ್ಯ ಬಸ್ಸುಗಳ ಖರೀದಿ.<br>• 200 ಹೊಸ ಸಾಮಾನ್ಯ ಬಸ್ಸುಗಳ ಖರೀದಿ.<br>• 40 ಪಲ್ಲಕ್ಕಿ ನಾನ್-ಎ.ಸಿ. ಸ್ಲೀಪರ್ ಬಸ್ಸುಗಳ ಖರೀದಿ.<br>• 04 ಎ.ಸಿ. ಮತ್ತು 04 ನಾನ್-ಎ.ಸಿ. ಸ್ಲೀಪರ್ ಬಸ್ಸುಗಳ ಖರೀದಿ.<br>• 300 ಸಂಖ್ಯೆ ವಿದ್ಯುತ್ ಚಾಲಿತ ವಾಹನಗಳನ್ನು ಜಿ.ಸಿ.ಸಿ ಆಧಾರದಲ್ಲಿ ಕಾರ್ಯಾಚರಣೆ ಬಸ್ಸುಗಳ ಖರೀದಿ.<br>• 350 ಸಂಖ್ಯೆ ಸಾಮಾನ್ಯ ಬಸ್ಸುಗಳ ಖರೀದಿ.<br><br>**ಬೆಂ.ಮ.ಸಾ.ಸಂಸ್ಥೆ:**<br><br>ಶಕ್ತಿ ಯೋಜನೆ ಜಾರಿಗೂ ಮೊದಲು 56646 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು, ಶಕ್ತಿ ಯೋಜನೆ ಜಾರಿಯಾದ ನಂತರದಲ್ಲಿ 57772 ಸರತಿಗಳನ್ನು ಮಾಡಲಾಗುತ್ತಿದೆ. ಪ್ರತಿದಿನ 1126 ಹೆಚ್ಚುವರಿ ಸರತಿಗಳನ್ನು ಕಾರ್ಯಾಚರಣೆಯನ್ನು ಮಾಡಲಾಗುತ್ತಿದೆ.<br><br>ಪ್ರಸಕ್ತ ಸಾಲಿನಲ್ಲಿ ಈ ಕೆಳಕಂಡ ಬಸ್ಸುಗಳನ್ನು ಖರೀದಿಸಲು ಪ್ರಕ್ರಿಯೆ ಜಾರಿಯಲ್ಲಿರುತ್ತದೆ:<br><br>• 840 ಬಿ.ಎಸ್-6 ಡೀಸೆಲ್ ಬಸ್<br>• 921 ಎಲೆಕ್ಟ್ರಿಕ್ ಬಸ್(ಜಿಸಿಸಿ)<br>• 100 ಫೀಡರ್ ಸರ್ವಿಸ್ (ಜಿಸಿಸಿ)<br>• 20 ಚಿಕ್ಕ ಬಸ್ (ಫೀಡರ್ ಸರ್ವಿಸ್)<br>• 05 ಡಬಲ್ ಡೆಕ್ಕರ್ ಬಸ್ ಹವಾನಿಯಂತ್ರಿತ (NCAP)<br>• 05 ಡಬಲ್ ಡೆಕ್ಕರ್ ಬಸ್ ಹವಾನಿಯಂತ್ರಿತ (DULT)<br>• ಸರ್ಕಾರದಿಂದ ಸಂಸ್ಥೆಗೆ ವಿಶೇಷ ಬಂಡವಾಳ ನೆರವಿನಡಿ ಒದಗಿಸಿರುವ ರೂ.150.00 ಕೋಟಿಗಳ ಅನುದಾನದಲ್ಲಿ 320 ಹವಾನಿಯಂತ್ರಿತ ಎಲೆಕ್ಟ್ರಿಕ್ ಬಸ್‌ಗಳನ್ನು ಕಾರ್ಯಾಚರಿಸಲು ಆಡಳಿತಾತ್ಮಕ ಅನುಮೋದನೆ ನೀಡಿ, ಮೊದಲನೇ ಕಂತಿನ ಅನುದಾನ ರೂ. 9353.16 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದ್ದು, ಟೆಂಡರ್ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| | | **ವಾ.ಕ.ರ.ಸಾ.ಸಂಸ್ಥೆ:**<br><br>ಶಕ್ತಿ ಯೋಜನೆ ಜಾರಿಗೂ ಮೊದಲು 34676 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು. ಶಕ್ತಿ ಯೋಜನೆ ಜಾರಿ ನಂತರದಲ್ಲಿ 35790 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಪ್ರತಿ ದಿನ 1114 ಹೆಚ್ಚುವರಿ ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.<br><br>ಜೂನ್-23ರ ನಂತರದ ಅವಧಿಯಲ್ಲಿ ಸಂಸ್ಥೆಯಲ್ಲಿ ಕಾರ್ಯಾಚರಣೆಯಲ್ಲಿದ್ದ 124 ಅಂತರರಾಜ್ಯ ಸಾರಿಗೆಗಳನ್ನು ಪರಿಷ್ಕರಿಸಿ ಸದರಿ ಅನುಸೂಚಿಗಳನ್ನು ರಾಜ್ಯದೊಳಗೆ ಕಾರ್ಯಾಚರಣೆಗೆ ಬಳಸಿಕೊಂಡು ಶಾಲಾ ವಿದ್ಯಾರ್ಥಿಗಳಿಗೆ / ಸಾರ್ವಜನಿಕರಿಗೆ ಅನುಕೂಲವಾಗುವಂತೆ ಕಾರ್ಯಾಚರಣೆ ಮಾಡಲಾಗುತ್ತಿದೆ.<br><br>ಸಂಸ್ಥೆಯಿಂದ ಕಳೆದ 04 ವರ್ಷಗಳಲ್ಲಿ ಹೊಸ ವಾಹನಗಳನ್ನು ಖರೀದಿಸಿರುವುದಿಲ್ಲ.<br><br>ಪ್ರಸಕ್ತ ಸಾಲಿನಲ್ಲಿ ಸಾರಿಗೆ ಸೌಲಭ್ಯಗಳ ಕೊರತೆಯನ್ನು ನೀಗಿಸಲು ಈ ಕೆಳಗಿನಂತೆ ಕ್ರಮ ಕೈಗೊಳ್ಳಲಾಗುತ್ತಿದೆ.:-<br><br>• 50 ಗ್ರಾಮಾಂತರ ಸಾರಿಗೆ ಬಸ್ಸುಗಳ ಖರೀದಿ.<br>• ಗ್ರಾಮಾಂತರ ಸಾರಿಗೆಯ 250 ಹೊಸ ಬಸ್ಸುಗಳ ಖರೀದಿ.<br>• ಸರ್ಕಾರದಿಂದ ಸಂಸ್ಥೆಗೆ ವಿಶೇಷ ಬಂಡವಾಳ ನೆರವಿನಡಿ ಒದಗಿಸಿರುವ ರೂ.150.00 ಕೋಟಿಗಳ ಅನುದಾನ ಸುಮಾರು 375 ಸಂಖ್ಯೆ ಗ್ರಾಮಾಂತರ ಸಾರಿಗೆಗಳನ್ನು ಖರೀದಿಸಲು ಆಡಳಿತಾತ್ಮಕ ಅನುಮೋದನೆ ನೀಡಿ, ಮೊದಲನೇ ಕಂತಿನ ಅನುದಾನ ರೂ.9353.16 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದ್ದು, ಖರೀದಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.<br>• ಡಲ್ಟ್ ಆರ್ಥಿಕ ಸಹಾಯದಿಂದ 100 ನಗರ ಸಾರಿಗೆ ಬಸ್ಸುಗಳ ಖರೀದಿ.<br>• 20-ನಾನ್ ಎ/ಸಿ ಸ್ಲೀಪರ್ ಹಾಗೂ 04-ಎ/ಸಿ ಸ್ಲೀಪರ್ ಬಸ್ಸುಗಳ ಖರೀದಿ.<br>• 450 ಎಲೆಕ್ಟ್ರಿಕ್ ಬಸ್‌ಗಳು (ಜಿಸಿಸಿ)<br><br>**ಕ.ಕ.ರ.ಸಾ.ನಿಗಮ**<br><br>ಶಕ್ತಿ ಯೋಜನೆ ಜಾರಿಗೂ ಮೊದಲು ಒಟ್ಟು 4028 ಅನುಸೂಚಿಗಳಿಂದ 22214 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು. ಯೋಜನೆ ಜಾರಿಯಾದ ನಂತರ ಒಟ್ಟು 4443 ಅನುಸೂಚಿಗಳಿಂದ 24744 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. 415 ಅನುಸೂಚಿಗಳನ್ನು ಹೆಚ್ಚಿಗೆ ಹಾಗೂ ಪ್ರತಿದಿನ 2530 ಹೆಚ್ಚುವರಿ ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.<br><br>ನಿಗಮದಿಂದ ಕಳೆದ 04 ವರ್ಷಗಳಲ್ಲಿ ಹೊಸ ವಾಹನಗಳನ್ನು ಖರೀದಿಸಿರುವುದಿಲ್ಲ. |

| ಕ್ರ. ಸಂ | ಪ್ರಶ್ನೆ | ಉತ್ತರ |
| --- | --- | --- |
| | | ಪ್ರಸಕ್ತ ಸಾಲಿನಲ್ಲಿ ಸಾರಿಗೆ ಸೌಲಭ್ಯಗಳ ಕೊರತೆಯನ್ನು ನೀಗಿಸಲು ಈ ಕೆಳಗಿನಂತೆ ಕ್ರಮ ಕೈಗೊಳ್ಳಲಾಗುತ್ತಿದೆ.:-<br>• ಸರ್ಕಾರದಿಂದ ನಿಗಮಕ್ಕೆ ವಿಶೇಷ ಬಂಡವಾಳ ನೆರವಿನಡಿ ಒದಗಿಸಿರುವ ರೂ.100.00 ಕೋಟಿಗಳ ಅನುದಾನದಲ್ಲಿ ಪೂರ್ಣ ಕವಚ ನಿರ್ಮಿತ 250 ವೇಗದೂತ ಸಾರಿಗೆಗಳನ್ನು ಖರೀದಿಸಲು ಖರೀದಿಸಲು ಖರೀದಿಸಲು ಆಡಳಿತಾತ್ಮಕ ಅನುಮೋದನೆ ನೀಡಿ, ಮೊದಲನೇ ಕಂತಿನ ಅನುದಾನ ರೂ.6235.44 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದ್ದು, ಖರೀದಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.<br>• ಪೂರ್ಣ ಕವಚ ನಿರ್ಮಿತ 123 ನಗರ ಸಾರಿಗೆ ಬಸ್ಸುಗಳನ್ನು ಡಲ್ಟ್ ಆರ್ಥಿಕ ಸಹಾಯದಿಂದ ಖರೀದಿಸಲು ಮಂಜೂರಾತಿ ದೊರೆತಿದ್ದು, ಖರೀದಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.<br>• 06 ವೋಲ್ವೋ ಎ.ಸಿ. ಸ್ಲೀಪರ್ ಕೋಚ್, 02 ಎ.ಸಿ. ಸ್ಲೀಪರ್ ಕೋಚ್, 14 ನಾನ್-ಎ.ಸಿ. ಸ್ಲೀಪರ್ ಕೋಚ್ ಮತ್ತು 612 ಗ್ರಾಮಾಂತರ ಸಾರಿಗೆ ಬಸ್‌ಗಳನ್ನು ಖರೀದಿಸಲಾಗಿದೆ. |
| ಊ. | ಸರ್ಕಾರಿ ಬಸ್‌ಗಳಲ್ಲಿ 60 ವರ್ಷ ಮೇಲ್ಪಟ್ಟ ಪುರುಷ ಪ್ರಯಾಣಿಕರಿಗೂ ಉಚಿತ ಪ್ರಯಾಣ ಸೌಲಭ್ಯ ಒದಗಿಸುವ ವಿಷಯ ಸರ್ಕಾರದ ಪರಿಶೀಲನೆಯಲ್ಲಿದೆಯೇ; ಹಾಗಿದ್ದಲ್ಲಿ, ಪ್ರಯಾಣದ ಮಿತಿಯನ್ನು ಎಷ್ಟು ಕಿಲೋಮೀಟರ್‌ವರೆಗೆ ನಿಗದಿಗೊಳಿಸಲಾಗುವುದು? | ಅಂತಹ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿರುವುದಿಲ್ಲ. |

ಸಂಖ್ಯೆ: ಟಿಡಿ 06 ಟಿಸಿಕ್ಯೂ 2024

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಮುಜರಾಯಿ ಸಚಿವರು